## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕಿವಿ ಆರೈಕೆ ಹಾಗೂ ಶ್ರವಣ ಆರೈಕೆ ಸೇವೆಗಳನ್ನು ಬಲಪಡಿಸಲು ತಾಲ್ಲೂಕು ಆಸ್ಪತ್ರೆಗಳಿಗೆ ಕಿವಿ ಶಸ್ತ್ರಚಿಕಿತ್ಸೆ ಹಾಗೂ ಶ್ರವಣ ದೋಷ ತಪಾಸಣೆಗೆ ಅಗತ್ಯವಿರುವ ಉಪಕರಣಗಳನ್ನು ಖರೀದಿಸಲು ಹಾಗೂ ಆಡಿಯಾಲಜಿಸ್ಟ್ ಗಳನ್ನು ಗುತ್ತಿಗೆ ಆಧಾರದ ಮೇಲೆ ಪಡೆಯಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**
1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಇವರ ಏಕ ಕಡತ ಸಂಖ್ಯೆ: HFWS-NPCD0OTHR/11/2026 (2280067).
2. ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 686 ವೆಚ್ಚ-5/2026, ದಿನಾಂಕ: 02.09.2026.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರ ಏಕ ಕಡತದಲ್ಲಿ ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಕಿವಿ ಮತ್ತು ಶ್ರವಣ ಆರೈಕೆ ಸೇವೆಗಳನ್ನು ಬಲಪಡಿಸುವ ಉದ್ದೇಶದಿಂದ ಕೆಳಕಂಡ ಅಂಶಗಳೊಂದಿಗೆ ಅಗತ್ಯವಿರುವ ಕಿವಿ ಶಸ್ತ್ರಚಿಕಿತ್ಸಾ ಉಪಕರಣಗಳು ಮತ್ತು ಆಡಿಯೋಮೆಟ್ರಿ ಉಪಕರಣಗಳನ್ನು 100 ತಾಲ್ಲೂಕು ಆಸ್ಪತ್ರೆಗಳಿಗೆ ಒದಗಿಸಲು ಹಾಗೂ ಪ್ರತಿ ತಾಲ್ಲೂಕು ಆಸ್ಪತ್ರೆಗೆ ಒಬ್ಬ ಆಡಿಯಾಲಜಿಸ್ಟ್ ಅಂತೆ ಒಟ್ಟು 100 ಆಡಿಯಾಲಜಿಸ್ಟ್‌ಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿ ಆಡಿಯೋಮೆಟ್ರಿ ಸೇವೆಗಳನ್ನು ಒದಗಿಸಲು ಆಡಳಿತಾತ್ಮಕ ಅನುಮೋದನೆಯನ್ನು ಕೋರಿ ಆಯುಕ್ತರು, ಆಕುಕ ಸೇವೆಗಳು, ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಅ) ಕೇಂದ್ರ ಸರ್ಕಾರದ ಆರೋಗ್ಯ ಭದ್ರತಾ ಸೆಸ್ ಅಧಿನಿಯಮ, 2025ರ ಅಡಿಯಲ್ಲಿ ಅಧಿಸೂಚಿಸಲಾದ ಯೋಜನೆಯಡಿ ರಾಜ್ಯಗಳಿಗೆ / ಕೇಂದ್ರಾಡಳಿತ ಪ್ರದೇಶಗಳಿಗೆ ಒದಗಿಸಲಾಗುವ ಆರ್ಥಿಕ ನೆರವಿನ ಮೂಲಕ ಈ ಪ್ರಸ್ತಾವನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ.

ಆ) 2026-27ನೇ ಹಣಕಾಸು ವರ್ಷದಲ್ಲಿ ಸಾರ್ವಜನಿಕ ಆರೋಗ್ಯ ಮೂಲಸೌಕರ್ಯ (PHI) ಬಲಪಡಿಸಲು ಈ ಯೋಜನೆಯಡಿ ರೂ. 4,200 ಕೋಟಿಗಳ ಅನುದಾನವನ್ನು ಮೀಸಲಿರಿಸಲಾಗಿದೆ.

ಇ) ಈ ವೆಚ್ಚವನ್ನು ಸಾರ್ವಜನಿಕ ಆರೋಗ್ಯ ಮೂಲಸೌಕರ್ಯವನ್ನು (PHI) ಬಲಪಡಿಸಲು ರಾಜ್ಯಗಳು / ಕೇಂದ್ರಾಡಳಿತ ಪ್ರದೇಶಗಳಿಗೆ ಒದಗಿಸುವ ಆರ್ಥಿಕ ನೆರವಿನ ಅನುದಾನದಿಂದ ಭರಿಸಲು ಪ್ರಸ್ತಾಪಿಸಲಾಗಿದೆ.

ಈ) ಇಎನ್‌ಟಿ ತಜ್ಞ ವೈದ್ಯರು ಲಭ್ಯವಿರುವ 100 ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಆಡಿಯೋಮೆಟ್ರಿ ಉಪಕರಣಗಳು ಹಾಗೂ ಕಿವಿ ಶಸ್ತ್ರಚಿಕಿತ್ಸಾ ಉಪಕರಣಗಳನ್ನು ಪ್ರತಿ ಆಸ್ಪತ್ರೆಗೆ ಅಂದಾಜು ರೂ. 40.78 ಲಕ್ಷಗಳ ವೆಚ್ಚದಲ್ಲಿ ಒದಗಿಸಲು ಪ್ರಸ್ತಾಪಿಸಲಾಗಿದೆ.

ಉ) ಆಡಿಯೋಮೆಟ್ರಿ ಪರೀಕ್ಷೆಗಳನ್ನು ನಡೆಸಲು ಅಗತ್ಯವಿರುವ ಮಾನವ ಸಂಪನ್ಮೂಲದ ಭಾಗವಾಗಿ, ಪ್ರತಿ ತಾಲ್ಲೂಕು ಆಸ್ಪತ್ರೆಗೆ ಒಬ್ಬ ಆಡಿಯಾಲಜಿಸ್ಟ್‌ರನ್ನು ರಾಜ್ಯ ಅನುದಾನ ಅಥವಾ NHM ಅನುದಾನದಡಿ ತಿಂಗಳಿಗೆ ರೂ. 30,000/- ಗೌರವಧನದಂತೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಉದ್ದೇಶಿಸಲಾಗಿದೆ. ಅದರಂತೆ 100 ಆಡಿಯಾಲಜಿಸ್ಟ್ ಗಳನ್ನು ಒಂದು ವರ್ಷದ ಅವಧಿಗೆ ನೇಮಕ ಮಾಡಲು ಅಂದಾಜು ₹3.60 ಕೋಟಿಗಳ ವೆಚ್ಚವಾಗಲಿದೆ.

ಊ) ಮಾನವ ಸಂಪನ್ಮೂಲ ಮತ್ತು ಸಲಕರಣೆಗಳಿಗೆ KSMSCL ಲೆಕ್ಕಶೀರ್ಷಿಕೆ: 2210-01-104-0-01 sub head 221 for materials and supplies ರಡಿ ಅಗತ್ಯವಾದ ಹಣವನ್ನು ಒದಗಿಸುವಂತೆ ಕೋರಲಾಗಿದೆ.

ಖ) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ (KTPP Act) ಮತ್ತು ಅದರಡಿ ರೂಪಿಸಲಾದ ನಿಯಮಾವಳಿಗಳನ್ವಯ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ (KSMSCL) ಮೂಲಕ ಟೆಂಡರ್ ಪ್ರಕ್ರಿಯೆ ಕೈಗೊಂಡು ಅಗತ್ಯ ಉಪಕರಣಗಳನ್ನು ಖರೀದಿಸಲಾಗುವುದು.

ಎ) 2026-27ನೇ ಹಣಕಾಸು ವರ್ಷದಲ್ಲಿ 100 ತಾಲ್ಲೂಕು ಮಟ್ಟದ ಆಸ್ಪತ್ರೆಗಳಿಗೆ ಕೆಳಕಂಡ ಆಡಿಯೋಮೆಟ್ರಿ ಉಪಕರಣಗಳು ಮತ್ತು ಕಿವಿ ಶಸ್ತ್ರಚಿಕಿತ್ಸಾ ಉಪಕರಣಗಳನ್ನು ಪ್ರತಿ ಆಸ್ಪತ್ರೆಗೆ ಅಂದಾಜು ರೂ. 40.78 ಲಕ್ಷಗಳ ವೆಚ್ಚದಲ್ಲಿ ಖರೀದಿಸಿ ಒದಗಿಸಲು ಹಾಗೂ 100 ಆಡಿಯಾಲಜಿಸ್ಟ್ ಗಳ ಮಾನವ ಸಂಪನ್ಮೂಲ ನೇಮಕಾತಿಗಾಗಿ ರೂ. 3.60 ಕೋಟಿಗಳ ಅನುದಾನ ಸೇರಿ, ಒಟ್ಟು ಅಂದಾಜು ರೂ. 44.38 ಕೋಟಿಗಳ ವೆಚ್ಚದಲ್ಲಿ ಖರೀದಿಸಲು ಪ್ರಸ್ತಾಪಿಸಲಾಗಿದೆ.

| Sl.No | Essential Items | Unit Costs in Lakhs | Quantity | Total budget in Lakhs |
|---|---|---|---|---|
| 1 | OAE | 3.00 | 100 | 300.00 |
| 2 | Pure tone audiometer | 3.00 | 100 | 300.00 |
| 3 | Impedance audiometer | 3.50 | 100 | 350.00 |
| 4 | ENT Cahir unit | 7.00 | 100 | 700.00 |
| 5 | Sound proof Room | 6.00 | 100 | 600.00 |
| 6 | Otoscope | 0.08 | 100 | 8.00 |
| 7 | Boothless audiometer | 5.2 | 100 | 520.00 |
| 8 | Operating Microscopes | 10.00 | 100 | 1000.00 |
| 9 | Ear surgical instruments | 2.00 | 100 | 200.00 |
| 10 | Micro drill instruments | 1.00 | 100 | 100.00 |
| | Total in Rs. | | | 4078.00 lakhs |
| 11 | Audiologist 100 @ Rs. 30000/ per month for Year | | | 360.00 lakhs |
| | Total | | | 4438.00 lakhs |

ಮೇಲೆ ಓದಲಾದ (2)ರ ಹಿಂಬರಹದಲ್ಲಿ ಮಾನ್ಯ ಮುಖ್ಯಮಂತ್ರಿಗಳ 100-ದಿನದ ಕಾರ್ಯಕ್ರಮದಡಿ ತಾಲ್ಲೂಕು ಆಸ್ಪತ್ರೆಗಳಲ್ಲಿ ಕಿವಿ ಆರೈಕೆ ಹಾಗೂ ಶ್ರವಣ ಆರೈಕೆ ಸೇವೆಗಳನ್ನು ಬಲಪಡಿಸುವ ಉದ್ದೇಶದಿಂದ 50 ತಾಲ್ಲೂಕು ಆಸ್ಪತ್ರೆಗಳಿಗೆ ಕಿವಿ ಶಸ್ತ್ರಚಿಕಿತ್ಸೆ ಹಾಗೂ ಶ್ರವಣ ದೋಷ ತಪಾಸಣೆಗೆ ಅಗತ್ಯವಿರುವ ಉಪಕರಣಗಳನ್ನು ಹಾಗೂ ಪ್ರತಿ ತಾಲ್ಲೂಕು ಆಸ್ಪತ್ರೆಗೆ ಒಬ್ಬರಂತೆ 50 ಆಡಿಯಾಲಜಿಸ್ಟ್ ಗಳನ್ನು ಗುತ್ತಿಗೆ ಆಧಾರದ ಮೇಲೆ ಪಡೆಯುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಸಹಮತಿ ನೀಡಿದೆ. ಸದರಿ ಕಾರ್ಯಕ್ರಮಕ್ಕೆ ಭಾರತ ಸರ್ಕಾರ (GoI)ದಿಂದ ಅನುಮೋದನೆ / ಧನಸಹಾಯ ದೊರೆತಲ್ಲಿ ಆಡಳಿತ ಇಲಾಖೆಯು ನಂತರ ಇದನ್ನು 100 ಕೇಂದ್ರಗಳಿಗೆ ವಿಸ್ತರಿಸಬಹುದಾಗಿದೆ ಎಂದು ತಿಳಿಸಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 343 ಸಿಜಿಇ 2026,**
**ಬೆಂಗಳೂರು, ದಿನಾಂಕ: 10.09.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮಾನ್ಯ ಮುಖ್ಯಮಂತ್ರಿಗಳ 100-ದಿನದ ಕಾರ್ಯಕ್ರಮದಡಿ ತಾಲ್ಲೂಕು ಆಸ್ಪತ್ರೆಗಳಲ್ಲಿ ಕಿವಿ ಆರೈಕೆ ಹಾಗೂ ಶ್ರವಣ ಆರೈಕೆ ಸೇವೆಗಳನ್ನು ಬಲಪಡಿಸಲು 50 ತಾಲ್ಲೂಕು ಆಸ್ಪತ್ರೆಗಳಿಗೆ ಕಿವಿ ಶಸ್ತ್ರಚಿಕಿತ್ಸೆ ಹಾಗೂ ಶ್ರವಣ ದೋಷ ತಪಾಸಣೆಗೆ ಅಗತ್ಯವಿರುವ ಉಪಕರಣಗಳನ್ನು ಖರೀದಿಸಲು ಹಾಗೂ 50 ಆಡಿಯಾಲಜಿಸ್ಟ್ ಗಳನ್ನು ಗುತ್ತಿಗೆ ಆಧಾರದ ಮೇಲೆ ಪಡೆಯುವ ಸಲುವಾಗಿ ಈ

ಕೆಳಕಂಡ ಅಂಶಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ:-

1. 50 ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಕಿವಿ ಮತ್ತು ಶ್ರವಣ ಆರೈಕೆ ಸೇವೆಗಳನ್ನು ಬಲಪಡಿಸುವ ಉದ್ದೇಶದಿಂದ, OAE, Pure Tone Audiometer, Impedance Audiometer, ENT Chair Unit, Sound Proof Room, Otoscope, Boothless Audiometer, Operating Microscope, Ear Surgical Instruments ಮತ್ತು Micro Drill Instruments ಸೇರಿದಂತೆ ಅಗತ್ಯ ಆಡಿಯೋಮೆಟ್ರಿ ಮತ್ತು ಕಿವಿ ಶಸ್ತ್ರಚಿಕಿತ್ಸಾ ಉಪಕರಣಗಳನ್ನು ಪ್ರತಿ ತಾಲ್ಲೂಕು ಮಟ್ಟದ ಆಸ್ಪತ್ರೆಗೆ ಅಂದಾಜು ರೂ. 40.78 ಲಕ್ಷಗಳಂತೆ ಒಟ್ಟು ಅಂದಾಜು ರೂ. 20.39 ಕೋಟಿಗಳ ವೆಚ್ಚದಲ್ಲಿ ಕೇಂದ್ರ ಸರ್ಕಾರದ ಆರೋಗ್ಯ ಭದ್ರತಾ ಸೆಸ್ ಅಧಿನಿಯಮ-2025ರ ಅಡಿಯಲ್ಲಿ ಅಧಿಸೂಚಿಸಲಾದ ಯೋಜನೆಯಡಿ ರಾಜ್ಯಗಳಿಗೆ / ಕೇಂದ್ರಾಡಳಿತ ಪ್ರದೇಶಗಳಿಗೆ ಒದಗಿಸಲಾಗುವ ಆರ್ಥಿಕ ನೆರವಿನ ಮೂಲಕ ಖರೀದಿಸಲು;
2. 50 ತಾಲ್ಲೂಕು ಮಟ್ಟದ ಆಸ್ಪತ್ರೆಗಳಿಗೆ ಒಂದು ವರ್ಷದ ಅವಧಿಗೆ, ಪ್ರತಿ ತಿಂಗಳಿಗೆ ರೂ. 30,000ರ ಗೌರವಧನದಂತೆ ಪ್ರತಿ ತಾಲ್ಲೂಕು ಆಸ್ಪತ್ರೆಗೆ ಒಬ್ಬರಂತೆ 50 ಆಡಿಯಾಲಜಿಸ್ಟ್ ಗಳನ್ನು ಒಟ್ಟು ರೂ. 1.8 ಕೋಟಿ ವೆಚ್ಚದಲ್ಲಿ ಗುತ್ತಿಗೆ ಆಧಾರದ ಮೇಲೆ ರಾಜ್ಯ ಅನುದಾನ ಅಥವಾ ಎನ್. ಹೆಚ್. ಎಂ ಅನುದಾನದಡಿ ನೇಮಕ ಮಾಡಿಕೊಳ್ಳಲು; ಹಾಗೂ
3. ಸದರಿ ಕಾರ್ಯಕ್ರಮಕ್ಕೆ ಭಾರತ ಸರ್ಕಾರದಿಂದ ಅನುಮೋದನೆ / ಧನ ಸಹಾಯ ದೊರೆತಲ್ಲಿ ಇದನ್ನು 100 ಕೇಂದ್ರಗಳಿಗೆ ವಿಸ್ತರಿಸಲು;

**ಷರತ್ತುಗಳು:**

a. ಅನುಮೋದಿತ ಕಾರ್ಯಕ್ರಮಗಳನ್ನು ಆಯಾ ಸಾಲಿನಲ್ಲಿ ನಿಗದಿತ ಅವಧಿಯಲ್ಲಿ ಅನುಮೋದಿತ ಅನುದಾನದಡಿ ಅನುಷ್ಠಾನಗೊಳಿಸತಕ್ಕದ್ದು.
b. ಖರೀದಿಗಳಿಗೆ ಸಂಬಂಧಿಸಿದಂತೆ (ಸರಕು & ಸೇವೆ) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಮತ್ತು ಅದರಡಿಯಲ್ಲಿನ ನಿಯಮಗಳನ್ನು ಚಾಚೂ ತಪ್ಪದೇ ಕಡ್ಡಾಯವಾಗಿ ಹಾಗೂ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
c. ಸದರಿ ಕಾರ್ಯಕ್ರಮಕ್ಕೆ ಭಾರತ ಸರ್ಕಾರದಿಂದ ಅನುಮೋದನೆ / ಧನ ಸಹಾಯ ದೊರೆತಲ್ಲಿ ಇದನ್ನು 100 ಕೇಂದ್ರಗಳಿಗೆ ವಿಸ್ತರಿಸಲು ಪ್ರತ್ಯೇಕ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.

ಸದರಿ ಆದೇಶವನ್ನು ಸಚಿವ ಸಂಪುಟದ ನಿರ್ಣಯ ಸಂಖ್ಯೆ: ಸಿ. 509/2026, ದಿನಾಂಕ: 09.09.2026ರಲ್ಲಿನ ಅನುಮೋದನೆ ಹಾಗೂ ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 686 ವೆಚ್ಚ-5/2026, ದಿನಾಂಕ: 02.09.2026 ರಲ್ಲಿನ ಸಹಮತಿಯ ಮೇರೆಗೆ ಹೊರಡಿಸಲಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪ್ರಭಾಕರ. ಟಿ) 10/09
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ಆರೋಗ್ಯ 1 & 2)
10.09.2026

**ಇವರಿಗೆ: -**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ), (ಇ & ಆರ್.ಎಸ್.ಎ), (ಎ & ಇ), ಕರ್ನಾಟಕ

ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.

2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಕುಷ್ಠರೋಗ ಆಸ್ಪತ್ರೆ ಆವರಣ, ಮಾಗಡಿ ರಸ್ತೆ, ಬೆಂಗಳೂರು.
3. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಸೌಧ, ಬೆಂಗಳೂರು.
4. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಆರೋಗ್ಯಸೌಧ, ಬೆಂಗಳೂರು.
5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಕುಷ್ಠರೋಗ ಆಸ್ಪತ್ರೆ ಆವರಣ, ಮಾಗಡಿ ರಸ್ತೆ, ಬೆಂಗಳೂರು.
6. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಕೆಪಿಸಿಎಲ್ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
7. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು.
8. ಹಿರಿಯ ನಿರ್ದೇಶಕರು ಹಾಗೂ ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಮಾನವ ಅಭಿವೃದ್ಧಿ ವಿಭಾಗ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿ, ಆಂತರಿಕ ಆರ್ಥಿಕ ಸಲಹೆಗಾರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಮುಖ್ಯ ಹಣಕಾಸು ಅಧಿಕಾರಿ ಮತ್ತು ಆರ್ಥಿಕ ಸಲಹೆಗಾರರು, ಆಕುಕ ನಿರ್ದೇಶನಾಲಯ, ಆರೋಗ್ಯ ಸೌಧ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-5), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
12. ಶಾಖಾ ರಕ್ಷಾ ಕಡತ

**<u>ಪ್ರತಿ ಮಾಹಿತಿಗಾಗಿ:</u>**

1. ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿರವರ ಆಪ್ತ ಸಹಾಯಕರು, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.